ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

(2)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 24/12/20

# ನನ್ನಿಂದ ಯಾವುದೇ ತಪ್ಪಾಗಿಲ್ಲ

ವಿಶ್ವವಾಣಿ 24-12-20

**ಬೆಂಗಳೂರು:** ವಿಧಾನಪರಿಷತ್‌ನಲ್ಲಿ ನಡೆದ ಗಲಾಟೆಗೆ ಸಂಬಂಧಿಸಿದಂತೆ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ಅವರು ಕಾರ್ಯದರ್ಶಿ ಮಹಾಲಕ್ಷ್ಮೀ ಅವರಿಗೆ ನೀಡಿದ್ದ ಶೋಕಾಸ್ ನೋಟಿಸ್‌ಗೆ ಬುಧವಾರ ಉತ್ತರ ನೀಡಿದ್ದಾರೆ. ಸಭಾಪತಿಗೆ ಮೂರು ಪುಟಗಳ ಪತ್ರದ ಮೂಲಕ ಸದನದಲ್ಲಿ ನಡೆದ ಘಟನೆಯ ಬಗ್ಗೆ ವಿವರಣೆ ನೀಡಿದ್ದಾರೆ ಎನ್ನಲಾಗಿದ್ದು, ಈ ಪ್ರಕರಣದಲ್ಲಿ ತಮ್ಮಿಂದ ಯಾವುದೇ ತಪ್ಪಾಗಿಲ್ಲ ಎನ್ನುವುದನ್ನು ಸಮರ್ಥಿಸಿಕೊಂಡಿದ್ದಾರೆ. ಸದನದ ಬೆಲ್ ನಡೆಯುತ್ತಿರುವಾಗಲೇ ಉಪ ಸಭಾಪತಿ ಧರ್ಮೇಗೌಡರು ಸಭಾಪತಿ ಸ್ಥಾನದ ಮೇಲೆ ಕುಳಿತಿರುವುದರ ಹಿಂದೆ ಷಡ್ಯಂತ್ರ ಇದೆ ಹಾಗೂ ಅದರಲ್ಲಿ ಕಾರ್ಯದರ್ಶಿಗಳೂ ಭಾಗಿಯಾಗಿರುವ ಬಗ್ಗೆ ಸಭಾಪತಿ ಅನುಮಾನ ವ್ಯಕ್ತಪಡಿಸಿ ಸೂಕ್ತ ಮಾಹಿತಿ ನೀಡುವಂತೆ ನೋಟಿಸ್ ನೀಡಿದ್ದರು. ಉಪಸಭಾಪತಿಗಳು ಸಭಾಪತಿ ಪೀಠದ ಮೇಲೆ ಕುಳಿತುಕೊಂಡಾಗ ಅವರಿಗೆ ಸಭಾಪತಿ ಇರುವಾಗ ತಾವು ಕೂರಬೇಕೊ ಬೇಡವೋ ಎನ್ನುವ ಮಾಹಿತಿಯ ಪತ್ರ ನೀಡಿರುವುದಾಗಿ ಕಾರ್ಯದರ್ಶಿ ಸಭಾಪತಿ ನೋಟಿಸ್ ಸ್ಪಷ್ಟೀಕರಣ ನೀಡಿದ್ದಾರೆ ಎಂದು ತಿಳಿದು ಬಂದಿದೆ. ಸದನದಲ್ಲಿ ಗಲಾಟೆ ನಡೆದ ಸಂದರ್ಭದಲ್ಲಿ ಸಚಿವರು ಹಿರಿಯ ಸದಸ್ಯರು ಹಾಜರಿದ್ದರು ಎಂಬ ಮಾಹಿತಿ ನೀಡಿದ್ದಾರೆ ಎನ್ನಲಾಗಿದ್ದು, ಆ ಸಂದರ್ಭದಲ್ಲಿ ತಮ್ಮಿಂದ ಯಾವುದೇ ಲೋಪವಾಗಿಲ್ಲ ಎಂದು ಸ್ಪಷ್ಟೀಕರಣ ನೀಡಿದ್ದಾರೆ.